Akashvani : Bangalore
National Bulletin In Kannada
05.04.2025 : 7.35AM

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

********

**ಮುಖ್ಯಾಂಶಗಳು:**

1. ಕೊಲಂಬೊದಲ್ಲಿಂದು ಶ್ರೀಲಂಕಾ ಅಧ್ಯಕ್ಷ ಅನುರ ಕುಮಾರ ದಿಸ್ಸಾನಾಯಕೆ ಅವರೊಂದಿಗೆ ಪ್ರಧಾನಿ ನರೇಂದ್ರ ಮೋದಿ ದ್ವಿಪಕ್ಷೀಯ ಸಭೆ
2. ಲೋಕಸಭಾಧ್ಯಕ್ಷ ಓಂ ಬಿರ್ಲಾ ನೇತೃತ್ವದ ಭಾರತೀಯ ನಿಯೋಗ ಉಜ್ಬೇಕಿಸ್ತಾನದಲ್ಲಿ ನಡೆಯಲಿರುವ ೧೫೦ನೇ ಅಂತರ ಸಂಸದೀಯ ಒಕ್ಕೂಟ ಸಭೆಯಲ್ಲಿ ಭಾಗಿ
3. ನಾವೀನ್ಯತೆ ಮತ್ತು ತಂತ್ರಜ್ಞಾನ ಚಾಲಿತ ಬೆಳವಣಿಗೆಯಲ್ಲಿ ಭಾರತ ಜಾಗತಿಕ ನಾಯಕನಾಗುವ ಹಾದಿಯಲ್ಲಿ ಮುನ್ನಡೆ - ಕೇಂದ್ರ ಸಚಿವ ಪಿಯೂಶ್ ಗೋಯಲ್
4. ಐಪಿಎಲ್ ಟಿ-೨೦ ಕ್ರಿಕೆಟ್; ಮುಂಬೈ ಇಂಡಿಯನ್ಸ್ ವಿರುದ್ಧ ಲಖನೌ ಸೂಪರ್ ಜೈಂಟ್ಸ್‌ಗೆ ೧೨ ರನ್‌ಗಳ ಜಯ

**********

ಶ್ರೀಲಂಕಾ ಪ್ರವಾಸದಲ್ಲಿರುವ ಪ್ರಧಾನಿ ನರೇಂದ್ರ ಮೋದಿ, ಕೊಲಂಬೊದಲ್ಲಿಂದು ಶ್ರೀಲಂಕಾ ಅಧ್ಯಕ್ಷ ಅನುರ ಕುಮಾರ ದಿಸ್ಸಾನಾಯಕೆ ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಲಿದ್ದಾರೆ. ಈ ವೇಳೆ ಇಂಧನ, ವ್ಯಾಪಾರ, ಸಂಪರ್ಕ, ಡಿಜಿಟಲೀಕರಣ ಮತ್ತು ರಕ್ಷಣಾ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿನ ಸಹಕಾರ ಬಲವರ್ಧನೆ ಕುರಿತಂತೆ ಮಾತುಕತೆ ನಡೆಸುವ ನಿರೀಕ್ಷೆಯಿದೆ. ಸಭೆಯ ಬಳಿಕ ವಿವಿಧ ಕ್ಷೇತ್ರಗಳಲ್ಲಿ ಭಾರತ ಅನುದಾನಿತ ಹಲವಾರು ಉಪಕ್ರಮಗಳನ್ನು ಘೋಷಿಸಲಾಗುವುದು. ವಿವಿಧ ಒಪ್ಪಂದಗಳಿಗೆ ಸಹಿ ಮತ್ತು ಪರಸ್ಪರ ವಿಚಾರ ವಿನಿಮಯ ಮಾಡಿಕೊಳ್ಳುವುದರ ಜೊತೆಗೆ, ಉಭಯ ನಾಯಕರು ಸಂಪೂರ್ ಸೌರಶಕ್ತಿ ಯೋಜನೆಯ ಶಿಲಾನ್ಯಾಸ ಸಮಾರಂಭದಲ್ಲಿ ವರ್ಚುವಲ್ ಮೂಲಕ ಭಾಗವಹಿಸಲಿದ್ದಾರೆ. ಭೇಟಿಯ ಭಾಗವಾಗಿ ಪ್ರಧಾನಿ, ಭಾರತೀಯ ಶಾಂತಿಪಾಲನಾ ಪಡೆಗಳ ಹುತಾತ್ಮ ಯೋಧರಿಗೆ ಐಪಿಕೆಎಫ್ ಸ್ಮಾರಕದಲ್ಲಿ ಗೌರವ ಸಲ್ಲಿಸಲಿದ್ದಾರೆ. ದ್ವೀಪ ರಾಷ್ಟ್ರ ಶ್ರೀಲಂಕಾಕ್ಕೆ ಮೂರು ದಿನಗಳ ಭೇಟಿಗಾಗಿ ಪ್ರಧಾನಿ ನಿನ್ನೆ ಸಂಜೆ ಶ್ರೀಲಂಕಾ ರಾಜಧಾನಿಗೆ ತಲುಪಿದರು. ಅಧ್ಯಕ್ಷ ದಿಸ್ಸಾನಾಯಕೆ ಅವರ ಸಂಪುಟದ ಸಚಿವರು ಬಂಡರನಾಯಕೆ

ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಅವರನ್ನು ಬರಮಾಡಿಕೊಂಡರು. ಅನಿವಾಸಿ ಭಾರತೀಯ ಸಮುದಾಯದ ಸದಸ್ಯರು ಉಭಯ ರಾಷ್ಟ್ರಗಳ ಕಲಾ ಪರಂಪರೆಯನ್ನು ಪ್ರದರ್ಶಿಸುವ ಸಾಂಸ್ಕೃತಿಕ ಪ್ರದರ್ಶನಗಳೊಂದಿಗೆ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಆತ್ಮೀಯ ಸ್ವಾಗತ ಕೋರಿದರು. ಬ್ಯಾಂಕಾಕ್‌ನಲ್ಲಿ ನಡೆದ ಎರಡು ದಿನಗಳ ಥೈಲ್ಯಾಂಡ್ ಭೇಟಿಯನ್ನು ಸಂಪನ್ನಗೊಳಿಸಿದ ನಂತರ ಪ್ರಧಾನಿ ಮೋದಿ ಶ್ರೀಲಂಕಾಕ್ಕೆ ಆಗಮಿಸಿದರು. ಅಲ್ಲಿ ಅವರು ಬಹು-ವಲಯ ತಾಂತ್ರಿಕ ಮತ್ತು ಆರ್ಥಿಕ ಸಹಕಾರಕ್ಕಾಗಿ ಬಂಗಾಳಕೊಲ್ಲಿ ಉಪಕ್ರಮ - ಬಿಮ್‌ಸ್ಟೆಕ್ ಶೃಂಗಸಭೆಯಲ್ಲಿ ಭಾಗವಹಿಸಿದರು.

**********

ಥೈಲ್ಯಾಂಡ್‌ನಲ್ಲಿ ನಡೆದ ಬಿಮ್‌ಸ್ಟೆಕ್ ಶೃಂಗಸಭೆಯ ನೇಪಥ್ಯದಲ್ಲಿ ಪ್ರಧಾನಿ ನರೇಂದ್ರ ಮೋದಿ ನಿನ್ನೆ ನೇಪಾಳ ಪ್ರಧಾನಿ ಕೆ.ಪಿ. ಶರ್ಮಾ ಓಲಿ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಿದರು. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿರುವ ನೇಪಾಳ ಪ್ರಧಾನಿ, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರೊಂದಿಗೆ ನಡೆಸಿದ ಮಾತುಕತೆಗಳು ಅರ್ಥಪೂರ್ಣ ಹಾಗೂ ಉತ್ಪಾದಕವಾಗಿದ್ದವು. ಇಂಧನ ಸಂಪರ್ಕ, ಸಂಸ್ಕೃತಿ ಮತ್ತು ಡಿಜಿಟಲ್ ತಂತ್ರಜ್ಞಾನ ಸೇರಿದಂತೆ ವಿವಿಧ ವಲಯಗಳಲ್ಲಿ ಉಭಯ ರಾಷ್ಟ್ರಗಳ ನಡುವಿನ ಸಹಕಾರದ ವಿವಿಧ ಆಯಾಮಗಳ ಕುರಿತು ಚರ್ಚಿಸಲಾಗಿದೆ ಎಂದರು. ಉಭಯ ನಾಯಕರು ಸುಮಾರು ೪೫ ನಿಮಿಷಗಳ ಕಾಲ ದ್ವಿಪಕ್ಷೀಯ ಸಭೆ ನಡೆಸಿದರು ಎಂದು ನಮ್ಮ ಬಾತ್ಮೀದಾರರು ವರದಿ ಮಾಡಿದ್ದಾರೆ.

**********

ಇದೇ ೧೧ರಂದು ಪ್ರಧಾನಿ ನರೇಂದ್ರ ಮೋದಿ ಮಧ್ಯಪ್ರದೇಶದ ಅಶೋಕನಗರ ಜಿಲ್ಲೆಯ ಇಸಾಘರ್‌ನಲ್ಲಿರುವ ಆನಂದ್ ಧಾಮ್‌ಗೆ ಭೇಟಿ ನೀಡಲಿದ್ದಾರೆ. ಈ ಕಾರ್ಯಕ್ರಮದ ಪೂರ್ವಸಿದ್ಧತಾ ಭಾಗವಾಗಿ ಮಧ್ಯಪ್ರದೇಶದ ಮುಖ್ಯಮಂತ್ರಿ ಡಾ. ಮೋಹನ್ ಯಾದವ್ ಸ್ಥಳಕ್ಕೆ ಭೇಟಿ ನೀಡಿ ವ್ಯವಸ್ಥೆಗಳನ್ನು ಪರಿಶೀಲಿಸಿದರು. ಮಧ್ಯಪ್ರದೇಶಕ್ಕೆ ಪ್ರಧಾನಿ ನರೇಂದ್ರ ಮೋದಿ ಅವರ ಎರಡನೇ ಭೇಟಿ ಇದಾಗಿದೆ.

**********

ಉಜ್ಬೇಕಿಸ್ತಾನದ ತಾಷ್ಕೆಂಟ್‌ನಲ್ಲಿ ಇಂದಿನಿಂದ ಆರಂಭವಾಗಲಿರುವ ಅಂತರ್ ಸಂಸದೀಯ ಒಕ್ಕೂಟ - ಐಪಿಯುನ ೧೫೦ನೇ ಸಭೆಯಲ್ಲಿ ಭಾರತೀಯ ನಿಯೋಗ ಪಾಲ್ಗೊಳ್ಳುತ್ತಿದ್ದು, ಅದರ ನೇತೃತ್ವವನ್ನು ಲೋಕಸಭಾಧ್ಯಕ್ಷ ಓಂ ಬಿರ್ಲಾ ವಹಿಸಲಿದ್ದಾರೆ.ಸಾಮಾಜಿಕ ಅಭಿವೃದ್ಧಿ ಮತ್ತು ನ್ಯಾಯಕ್ಕಾಗಿ ಸಂಸದೀಯ ಕ್ರಮ ಎಂಬ ವಿಷಯದ ಬಗ್ಗೆ ಉನ್ನತ ಮಟ್ಟದ ಚರ್ಚೆಯಲ್ಲಿ ಓಂ ಬಿರ್ಲಾ ಸಭೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ. ನಿಯೋಗದಲ್ಲಿ ರಾಜ್ಯಸಭಾ ಉಪಾಧ್ಯಕ್ಷ ಹರಿವಂಶ್ ಮತ್ತು ಭರ್ತೃಹರಿ ಮೆಹ್ತಾಬ್, ಅನುರಾಗ್ ಸಿಂಗ್ ಠಾಕೂರ್, ಡಾ. ಸಸ್ಮಿತ್ ಪಾತ್ರ, ಅಶೋಕ್ ಕುಮಾರ್ ಮಿತ್ತಲ್, ಕಿರಣ್ ಚೌಧರಿ ಮತ್ತು ಲತಾ ವಾಂಖೆಡೆ ಇದ್ದಾರೆ. ಭಾರತೀಯ ಸಂಸದೀಯ ನಿಯೋಗ ಐಪಿಯುನ ವಿವಿಧ ಸಂಸ್ಥೆಗಳಲ್ಲಿ ಆಡಳಿತ ಮಂಡಳಿ, ಕಾರ್ಯಕಾರಿ ಸಮಿತಿ, ಸ್ಥಾಯಿ ಸಮಿತಿ ಸಭೆ ಸೇರಿದಂತೆ ವಿವಿಧ ವಿಷಯಾಧಾರಿತ ಚರ್ಚೆಗಳಲ್ಲಿ ಪಾಲ್ಗೊಳ್ಳಲಿದೆ. ತಮ್ಮ ಭೇಟಿಯ ವೇಳೆ ಲೋಕಸಭಾಧ್ಯಕ್ಷ ಓಂ ಬಿರ್ಲಾ, ಉಜ್ಬೇಕಿಸ್ತಾನದಲ್ಲಿರುವ ಭಾರತೀಯ ಸಮುದಾಯದ ಸದಸ್ಯರು ಹಾಗೂ ಭಾರತೀಯ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಲಿದ್ದಾರೆ.

**********

ಉತ್ತರ ಕನ್ನಡ ಜಿಲ್ಲೆಯ ಕಾರವಾರದ ನೌಕಾನೆಲೆಗೆ ಇಂದು ಕೇಂದ್ರ ರಕ್ಷಣಾ ಸಚಿವ ರಾಜನಾಥ ಸಿಂಗ್ ಭೇಟಿ ನೀಡಲಿದ್ದಾರೆ. ಮಧ್ಯಾಹ್ನ ೧ ಗಂಟೆಗೆ ಐ.ಎನ್.ಎಸ್ ಕದಂಬ ನೌಕಾನೆಲೆಗೆ ಆಗಮಿಸಲಿರುವ ರಕ್ಷಣಾ ಸಚಿವರು, ಇಂಡಿಯನ್ ಓಶಿಯನ್ ಶಿಪ್ 'ಸಾಗರ'ಕ್ಕೆ ಚಾಲನೆ ನೀಡಲಿದ್ದಾರೆ. ನಂತರ ಸೀಬರ್ಡ್ ಪ್ರಾಜೆಕ್ಟ್ ನ ವಿವಿಧ ಯೋಜನೆಗಳನ್ನು ಉದ್ಘಾಟಿಸಲಿದ್ದಾರೆ ಎಂದು ಭಾರತೀಯ ನಾಕಾದಳದ ಪ್ರಕಟಣೆಯಲ್ಲಿ ತಿಳಿಸಿದೆ.

**********

ನಾವೀನ್ಯತೆ ಮತ್ತು ತಂತ್ರಜ್ಞಾನ ಚಾಲಿತ ಬೆಳವಣಿಗೆಯಲ್ಲಿ ಭಾರತ ಜಾಗತಿಕ ನಾಯಕನಾಗಿ ಹೊರಹೊಮ್ಮಲಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಶ್ ಗೋಯಲ್ ಹೇಳಿದ್ದಾರೆ. ನವದೆಹಲಿಯ ಭಾರತಮಂಟಪದಲ್ಲಿ ನಿನ್ನೆ ಎರಡನೇ ಆವೃತ್ತಿಯ ಸ್ಟಾರ್ಟ್‌ಅಪ್ ಮಹಾಕುಂಭದಲ್ಲಿ ಮಾತನಾಡಿದರು. ಅವರು ದೇಶ ನಾವೀನ್ಯತಾ ಕ್ಷೇತ್ರದಲ್ಲಿ ದಾಪುಗಾಲಿಡುತ್ತಾ ಮುನ್ನಡೆಯುತ್ತಿದ್ದು, ಶೀಘ್ರದಲ್ಲಿ ಜಾಗತಿಕ ಮಟ್ಟದಲ್ಲಿ ಬಲವಾದ ಪ್ರಭಾವ ಬೀರಲಿದೆ. ಇಂಧನ ದಕ್ಷತೆ, ವಿದ್ಯುನ್ಮಾನಕ್ಕೆ ಉತ್ತೇಜನ ಹಾಗೂ ರಕ್ಷಣಾ ಉಪಕರಣಗಳ ಮೇಲೆ ಕೇಂದ್ರಿತ ತಂತ್ರಜ್ಞಾನಗಳ ಜಾಗತಿಕ ಮಟ್ಟದ ಪ್ರದರ್ಶನವನ್ನು ಯುವ ನವೋದ್ಯಮಗಳು ನಡೆಸಿಕೊಟ್ಟಿವೆ ಎಂದು ಹೇಳಿದರು. ಸ್ಟಾರ್ಟ್ ಅಪ್ ಮಹಾಕುಂಭದಲ್ಲಿ ಮೂರು ಸಾವಿರಕ್ಕೂ ಅಧಿಕ

ನವೋದ್ಯಮಗಳು, ಒಂದು ಸಾವಿರಕ್ಕೂ ಅಧಿಕ ಹೂಡಿಕೆದಾರರು ಮತ್ತು ೫೦ ರಾಷ್ಟ್ರಗಳ ಸುಮಾರು ೧೦ ಸಾವಿರ ಪ್ರತಿನಿಧಿಗಳು ಭಾಗವಹಿಸಿದ್ದರು.

***ಧ್ವನಿ*** ಪಿಯೂಶ್ ಗೋಯಲ್

**********

ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಇಂದಿನಿಂದ ಎರಡು ದಿನಗಳ ಕಾಲ ತಮಿಳುನಾಡು ಪ್ರವಾಸ ಕೈಗೊಳ್ಳಲಿದ್ದಾರೆ. ಈ ವೇಳೆ ಅವರು, ಆಧುನೀಕರಿಸಿದ ಪಂಬನ್ ರೈಲು ಸೇತುವೆಯ ಉದ್ಘಾಟನೆಗೆ ಅಂತಿಮ ಸಿದ್ಧತೆಗಳ ಮೇಲ್ವಿಚಾರಣೆಗೆ ಅವರು ರಾಮೇಶ್ವರಂಗೆ ಭೇಟಿ ನೀಡಲಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರು ಪಂಬನ್ ರೈಲು ಸೇತುವೆಯನ್ನು ಉದ್ಘಾಟಿಸಲು ನಾಳೆ ರಾಜ್ಯಕ್ಕೆ ಭೇಟಿ ನೀಡಲಿದ್ದಾರೆ. ಇದೇ ವೇಳೆ ಪ್ರಧಾನಿ, ರೈಲು ಹಾಗೂ ಹಡಗಿಗೆ ಹಸಿರುನಿಶಾನೆ ತೋರಲಿದ್ದು, ಸೇತುವೆಯ ಕಾರ್ಯಾಚರಣೆಯನ್ನು ವೀಕ್ಷಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಕೇಂದ್ರ ಮಾಹಿತಿ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಡಾ. ಎಲ್. ಮುರುಗನ್ ಭಾಗವಹಿಸುವ ನಿರೀಕ್ಷೆ ಇದೆ.

**********

ಇಂದು ದೇಶಾದ್ಯಂತ ರಾಷ್ಟ್ರೀಯ ಕಡಲ ದಿನವನ್ನು ಆಚರಿಸಲಾಗುತ್ತಿದೆ. ದೇಶದ ಆರ್ಥಿಕತೆ, ರಕ್ಷಣೆ ಮತ್ತು ವ್ಯಾಪಾರದಲ್ಲಿ ಕಡಲ ಉದ್ಯಮ ವಹಿಸುವ ಪಾತ್ರವನ್ನು ಗುರುತಿಸಲು ಮತ್ತು ಗೌರವಿಸಲು ಪ್ರತಿ ವರ್ಷ ಏಪ್ರಿಲ್ ೫ ರಂದು ಈ ದಿನವನ್ನು ಆಚರಿಸಲಾಗುತ್ತದೆ. ಕಡಲ ಕಾರ್ಯಾಚರಣೆಗಳ ಮಹತ್ವವನ್ನು ಎತ್ತಿ ತೋರಿಸುವ ಗುರಿ ಈ ದಿನ ಹೊಂದಿದ್ದು, ಸಮುದ್ರದ ತೀಕ್ಷ್ಣ ವಾತಾವರಣದಲ್ಲಿ ದೀರ್ಘಕಾಲ ಇದ್ದು, ಹೋರಾಡುವವರಿಗೆ ಕೃತಜ್ಞತೆ ವ್ಯಕ್ತಪಡಿಸುವ ದಿನವೂ ಇದಾಗಿದೆ.

**********

ಛತ್ತೀಸ್‌ಗಢದ ಬಸ್ತಾರ್ ವಿಭಾಗದ ದಂತೇವಾಡ ಜಿಲ್ಲೆಯಲ್ಲಿ ನಡೆಯುವ ಬಸ್ತಾರ್ ಪಾಂಡುಂ ಉತ್ಸವದ ಸಮಾರೋಪ ಸಮಾರಂಭದಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಭಾಗವಹಿಸಲಿದ್ದಾರೆ. ಛತ್ತೀಸ್‌ಗಢಕ್ಕೆ ಎರಡು ದಿನಗಳ ಭೇಟಿಗಾಗಿ ಅಮಿತ್ ಶಾ ಅವರು ನಿನ್ನೆ ಸಂಜೆ ರಾಯ್‌ಪುರಕ್ಕೆ ಆಗಮಿಸಿದರು. ಬಸ್ತಾರ್‌ನ ಶ್ರೀಮಂತ ಬುಡಕಟ್ಟು ಕಲೆ ಮತ್ತು ಸಂಸ್ಕೃತಿಯನ್ನು ಪುನರುಜ್ಜೀವನಗೊಳಿಸಲು ಮತ್ತು ದೇಶ - ವಿದೇಶಗಳಿಗೆ ಅದನ್ನು ಪರಿಚಯಿಸಲು ಬಸ್ತಾರ್ ಪಾಂಡುಂ ಅಂದರೆ ಬಸ್ತಾರ್ ಉತ್ಸವವನ್ನು ಆಯೋಜಿಸಲಾಗುತ್ತಿದೆ. ಈ ಮೂರು ದಿನಗಳ

ಕಾರ್ಯಕ್ರಮದ ಅಂಗವಾಗಿ, ಬುಡಕಟ್ಟು ನೃತ್ಯ, ಜಾನಪದ ಹಾಡು, ಬುಡಕಟ್ಟು ನಾಟಕ, ಸಂಗೀತ ವಾದ್ಯಗಳು, ವೇಷಭೂಷಣಗಳು, ಆಭರಣಗಳು, ಕರಕುಶಲ ವಸ್ತುಗಳು ಸೇರಿದಂತೆ ಏಳು ವಿಭಾಗಗಳಲ್ಲಿ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ. ಬಸ್ತಾರ್ ಪಾಂಡುಂ ಅಂಗವಾಗಿ ಏಪ್ರಿಲ್ ೩ರಂದು ಪ್ರಾರಂಭವಾದ ವಿಭಾಗೀಯ ಮಟ್ಟದ ಸ್ಪರ್ಧೆಗಳು ಇಂದು ಮುಕ್ತಾಯಗೊಳ್ಳಲಿವೆ. ಕೇಂದ್ರ ಗೃಹ ಸಚಿವರು ದಂತೇವಾಡದಲ್ಲಿರುವ ಮಾ ದಂತೇಶ್ವರಿ ದೇವಾಲಯಕ್ಕೆ ಭೇಟಿ ನೀಡಲಿದ್ದಾರೆ. ಇದಲ್ಲದೆ, ಅವರು ಇಂದು ಸಂಜೆ ರಾಯ್‌ಪುರದಲ್ಲಿ ಇಲಾಖಾ ಪರಿಶೀಲನಾ ಸಭೆಯ ಅಧ್ಯಕ್ಷತೆಯನ್ನು ವಹಿಸುವ ಮೂಲಕ ನಕ್ಸಲ್ ವಿರೋಧಿ ಕಾರ್ಯಾಚರಣೆಗಳನ್ನು ಪರಿಶೀಲಿಸುವುದರ ಜೊತೆಗೆ ಭವಿಷ್ಯದ ಕಾರ್ಯತಂತ್ರದ ಬಗ್ಗೆ ಚರ್ಚಿಸಲಿದ್ದಾರೆ.

**********

ಉತ್ತರ ಪ್ರದೇಶದ ಏಕನಾ ಕ್ರೀಡಾಂಗನದಲ್ಲಿ ಕಳೆದ ರಾತ್ರಿ ನಡೆದ ಇಂಡಿಯನ್ ಪ್ರೀಮಿಯರ್ ಲೀಗ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ವಿರುದ್ಧ ಲಖನೌ ಸೂಪರ್ ಜೈಂಟ್ಸ್ ೧೨ ರನ್‌ಗಳಿಂದ ಗೆಲುವು ಸಾಧಿಸಿದೆ. ಟಾಸ್ ಸೋತು ಮೊದಲು ಬ್ಯಾಟ್ ಮಾಡಿದ ಲಖನೌ ತಂಡ, ನಿಗದಿತ ೨೦ ಓವರ್‌ಗಳಲ್ಲಿ ೮ ವಿಕೆಟ್ ನಷ್ಟಕ್ಕೆ ೨೦೩ರನ್ ಗಳಿಸಿತು. ಪ್ರತ್ಯುತ್ತರವಾಗಿ ಮುಂಬೈ, ನಿಗದಿತ ೨೦ ಓವರ್‌ಗಳಲ್ಲಿ ೫ ವಿಕೆಟ್ ನಷ್ಟಕ್ಕೆ ೧೯೧ ರನ್ ಗಳಿಸಲಷ್ಟೇ ಶಕ್ತವಾಯಿತು. ಚೆನ್ನೈನ ಎಂ.ಎ. ಚಿದಂಬರಂ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಮೊದಲ ಪಂದ್ಯದಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ಹಾಗೂ ಡೆಲ್ಲಿ ಕ್ಯಾಪಿಟಲ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಅಪರಾಹ್ನ ೩.೩೦ಕ್ಕೆ ಆರಂಭವಾಗಲಿದೆ. ಪಂಜಾಬ್‌ನ ತಿರಾದಲ್ಲಿ ನಡೆಯಲಿರುವ ದಿನದ ಎರಡನೇ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ಹಾಗೂ ರಾಜಸ್ಥಾನ್ ರಾಯಲ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ.

*****END*****